ಕ್ರ.ಸಂ. 59, 149ನೇ ಅಧಿವೇಶನ

## ಕರ್ನಾಟಕ ವಿಧಾನ ಪರಿಷತ್ತು
## ಶೂನ್ಯ ವೇಳೆ ಪ್ರಸ್ತಾವ

ಮಾನ್ಯ ಶಾಸಕರು, ಕರ್ನಾಟಕ ವಿಧಾನ ಪರಿಷತ್ತು ಶ್ರೀ ಟಿ.ಎ.ಶರವಣರವರ ದಿನಾಂಕ:23.02.2023ರ ಗುರುವಾರ ಶೂನ್ಯ ವೇಳೆಯ ಪ್ರಸ್ತಾವ: ಆರೋಗ್ಯ ಇಲಾಖೆಯಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿಯಲ್ಲಿ ಒಳಗುತ್ತಿಗೆ ಆಧಾರದ ಮೇಲೆ 30,000 ಕ್ಕಿಂತ ಅಧಿಕ ನೌಕರರು ಸುಮಾರು 10-15 ವರ್ಷಗಳಿಂದ ನಿರಂತರವಾಗಿ ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಎನ್.ಹೆಚ್.ಎಂ ಕಾರ್ಯಕ್ರಮದ ಜೊತೆಯಲ್ಲಿ ನಾಗರಿಕರ ಆರೋಗ್ಯ ಕಾಪಾಡುವಲ್ಲಿ ಮಹತ್ತರ ಪಾತ್ರವಹಿಸುತ್ತಿದ್ದಾರೆ. ಸದರಿಯವರಿಗೆ ಅಲ್ಪಮೊತ್ತದ ವೇತನ ಬಿಟ್ಟರೆ ಇನ್ನುಳಿದ ಸೌಲಭ್ಯ ನೀಡುತ್ತಿಲ್ಲ. ಸರ್ಕಾರ ನೀಡುತ್ತಿರುವ ಅಲ್ಪ ವೇತನವು ಕುಟುಂಬ ನಿರ್ವಹಣೆ ಮಾಡಲು ಕಷ್ಟವಾಗುತ್ತಿದೆ.

2016 ರಲ್ಲಿ ಸುಪ್ರಿಂ ಕೋರ್ಟ್ ಉದ್ಯೋಗ ಭದ್ರತೆ, ಸಮಾನ ವೇತನ ಮತ್ತು ಉದ್ಯೋಗ ಖಾತ್ರಿಗೊಳಿಸುವಂತೆ ಸೂಚಿಸಲಾಗಿದೆ. ಆದರೆ ಇಲ್ಲಿಯವರೆಗೂ ಜಾರಿಮಾಡಿರುವುದಿಲ್ಲ. ಹಾಗೂ ಕೆಲವು ರಾಜ್ಯಗಳು ಎನ್.ಹೆಚ್.ಎಂ ನೌಕರರ ಸೇವೆಯನ್ನು ಖಾಯಂಗೊಳಿಸಲು ಪ್ರಕ್ರಿಯೆ ಪ್ರಾರಂಭ ಮಾಡಿರುತ್ತವೆ. ಎನ್.ಹೆಚ್.ಎಂ ನೌಕರರು ಸರ್ಕಾರದ ಗಮನ ಸೆಳೆಯಲು ಸ್ವಾತಂತ್ರ್ಯ ಉದ್ಯಾನವನದಲ್ಲಿ ಅನಿರ್ದಿಷ್ಟಾವಧಿ ಮುಷ್ಕರ ಪ್ರಾರಂಭಿಸಿ 10 ದಿನಗಳು ಕಳೆದರೂ ಪ್ರತಿಭಟನಾ ಸ್ಥಳಕ್ಕೆ ಅಧಿಕಾರಿಗಳಾಗಲಿ ಸಚಿವರಾಗಲಿ ಭೇಟಿನ ನೀಡಿಲ್ಲವೆಂದು ಪ್ರತಿಭಟನಾ ನಿರತರು ನನ್ನ ಮುಂದೆಯೇ ತಮ್ಮ ಅಳಲು ತೋಡಿಕೊಂಡಿದ್ದಾರೆ. ಆದ್ದರಿಂದ ಘನ ಸರ್ಕಾರವು ನೌಕರರನ್ನು ಬೇಡಿಕೆಗಳನ್ನು ಈಡೇರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

ಈ ವಿಷಯದ ಬಗ್ಗೆ ದಿನಾಂಕ:22.02.2023ರಂದು ಕನ್ನಡ ಪ್ರಭ ಪತ್ರಿಕೆಯಲ್ಲಿ ಪ್ರಕಟಗೊಂಡಿರುತ್ತದೆ. ಈ ಸಾರ್ವಜನಿಕ ವಿಷಯವನ್ನು ಸದನದಲ್ಲಿ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸುತ್ತೇನೆ.

### ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಹೇಳಿಕೆ:-

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ, ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆ ಯಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ನೌಕರರ ಬೇಡಿಕೆಗಳಲ್ಲಿ ಒಂದಾದ 15% ವೇತನ ಹೆಚ್ಚುವರಿ ಮಾಡುವ ಬಗ್ಗೆ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ರಾಷ್ಟ್ರೀಯ ಆರೋಗ್ಯ ಅಭಿಯಾನವು ಕೇಂದ್ರ ಸರ್ಕಾರದ ಯೋಜನೆಯಾಗಿದೆ. ಈ ಯೋಜನೆಯಡಿ ಎಲ್ಲಾ ಹುದ್ದೆಗಳು ತಾತ್ಕಾಲಿಕವಾಗಿವೆ. ಸದರಿ ಹುದ್ದೆಗಳಿಗೆ ನೇಮಕ ಮಾಡುವ ವೇಳೆಯಲ್ಲಿ ಈ ಹುದ್ದೆಗಳು ತಾತ್ಕಾಲಿಕ ಹುದ್ದೆಗಳೆಂದು ತಿಳಿಸಲಾಗಿರುತ್ತದೆ ಹಾಗೂ ಈ ಹುದ್ದೆಗಳು, ಯೋಜನೆಯು ಚಾಲ್ತಿಯಲ್ಲಿರುವವರೆಗೆ ಮಾತ್ರ ಇರುತ್ತವೆ. ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಯಾವುದೇ ಹುದ್ದೆಗಳು ಖಾಯಂ ಇರುವುದಿಲ್ಲ. ಈ ಹುದ್ದೆಗಳ ಸಿಬ್ಬಂದಿಯ ಸೇವೆಗಳನ್ನು ಖಾಯಂಗೊಳಿಸಲು ಅವಕಾಶವಿರುವುದಿಲ್ಲ.

ಸಂಖ್ಯೆ:ಆಕುಕ 29 ಎಸ್.ಟಿ.ಕ್ಯೂ 2023

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು.